# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 673 (896) |
| ಸದಸ್ಯರ ಹೆಸರು | : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 26.12.2022 |
| ಉತ್ತರಿಸುವ ಸಚಿವರು | : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮುಂಬರುವ ಚುನಾವಣೆಗಾಗಿ ಮತದಾರರ ಪಟ್ಟಿ ಪರಿಷ್ಕರಣೆಯ ಕಾರ್ಯಕ್ಕಾಗಿ ಕೇವಲ ಶಿಕ್ಷಣ ಇಲಾಖೆಯ ಶಿಕ್ಷಕರನ್ನು ನಿಯೋಜಿಸಲು ಕಾರಣವೇನು; | ಪ್ರಜಾ ಪ್ರತಿನಿಧಿ ಕಾಯ್ದೆ 1950 ಕಲಂ 13ಬಿ(2) ಮತ್ತು 13 ಸಿಸಿ ರಡಿ ಭಾರತ ಸರ್ಕಾರದ ಚುನಾವಣಾ ಆಯೋಗದ ನಿರ್ದೇಶನದಂತೆ ಶಿಕ್ಷಕರನ್ನು ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕೆ ದಿನಾಂಕ:09-11-2022 ರಿಂದ 08-12-2022ರೊಳಗಾಗಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಪೂರ್ಣಗೊಳಿಸುವ ಷರತ್ತಿಗೆ ಒಳಪಟ್ಟು ನಿಯೋಜಿಸಲಾಗಿರುತ್ತದೆ. |
| ಆ) | ಸುಮಾರು 60,000 ಕ್ಕೂ ಹೆಚ್ಚಿನ ಶಿಕ್ಷಕರನ್ನು ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕೆ ನಿಯೋಜಿಸಿದರೆ, ಶೈಕ್ಷಣಿಕ ಚಟುವಟಿಕೆಗಳಿಗೆ ಹೆಚ್ಚಿನ ಹಿನ್ನಡೆಯಾಗುತ್ತದೆಯೆಂಬ ಆತಂಕ ಎದುರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ಪ್ರಜಾ ಪ್ರತಿನಿಧಿ ಕಾಯ್ದೆ 1950 ಕಲಂ 13ಬಿ(2) ಮತ್ತು 13 ಸಿಸಿ ರನ್ವಯ ಕೇಂದ್ರ ಚುನಾವಣಾ ಆಯೋಗದ ನಿರ್ದೇಶನವನ್ನು ಪಾಲಿಸಬೇಕಾಗಿರುತ್ತದೆ. ಆದಾಗ್ಯೂ, ಶೈಕ್ಷಣಿಕ ಚಟುವಟಿಕೆಗೆ ತೊಂದರೆ ಉಂಟಾಗದಂತೆ ಶಾಲೆಯಲ್ಲಿ ಲಭ್ಯವಿರುವ ಶಿಕ್ಷಕರ ಸಂಪನ್ಮೂಲವನ್ನು ಆಧರಿಸಿ ಸರಿದೂಗಿಸಿಕೊಂಡು ಶೈಕ್ಷಣಿಕ ಚಟುವಟಿಕೆಗೆ ಪರಿಣಾಮಕಾರಿ ತೊಂದರೆ ಉಂಟಾಗದ ಹಾಗೆ ಕ್ರಮವಹಿಸಲಾಗುತ್ತಿದೆ. |
| ಇ) | ಚುನಾವಣೆಯ ಕಾರ್ಯದಿಂದ ಶಿಕ್ಷಕರನ್ನು ಮುಕ್ತಗೊಳಿಸಲು ಸರ್ಕಾರಕ್ಕೆ ಅನೇಕ ಬಾರಿ ಮನವಿ ಮಾಡಿದ್ದರೂ ಕೂಡ, ಇಲ್ಲಿಯವರೆಗೆ ಸರ್ಕಾರ ಈ ಬಗ್ಗೆ ಯಾವುದೇ ಕ್ರಮಗಳನ್ನು ಕೈಗೊಳ್ಳದಿರುಲು ಕಾರಣಗಳೇನು? (ವಿವರ ನೀಡುವುದು) | |

ಸಂಖ್ಯೆ: ಇಪಿ 100 ಪಿಎಂಎ 2022

(ಬಿ.ಸಿ. ನಾಗೇಶ್),
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು